## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಿಲ್ಲಾ ಯೋಜನಾ ಸಮಿತಿ ಸಭೆಗಳಿಗೆ ಹಾಜರಾಗುವ ಸದಸ್ಯರುಗಳಿಗೆ ಭವಿಷ್ಯವರ್ತಿ ಉಪವೇಶನ ಭತ್ಯೆಯನ್ನು ಪಾವತಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿಪಿ 229 ಜೆಡ್‌ಪಿಎಸ್ 2000, ದಿನಾಂಕ: 12-04-2001.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 67 ಜಿಪಸ 2014, ದಿನಾಂಕ:17-03-2015.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ಜಿಪಸ 2014, ದಿನಾಂಕ:24-07-2015.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 193 ಜಿಪಸ 2016, ದಿನಾಂಕ:03-06-2017.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಸುತ್ತೋಲೆಯಲ್ಲಿ ಜಿಲ್ಲಾ ಯೋಜನಾ ಸಮಿತಿಗಳ ಪಾತ್ರ ಹಾಗೂ ಅವುಗಳ ಕಾರ್ಯಚಟುವಟಿಕೆಗಳ ಬಗ್ಗೆ ಮಾರ್ಗಸೂಚಿಯನ್ನು ಹೊರಡಿಸಲಾಗಿತ್ತು. ಮೇಲೆ ಓದಲಾದ(2)ರ ಸುತ್ತೋಲೆಯಲ್ಲಿ 3ನೇ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಜಿಲ್ಲಾ ಯೋಜನೆ ಸಮಿತಿಗಳು ಕ್ರಿಯಾತ್ಮಕವಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಮತ್ತಷ್ಟು ಪೂರಕ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಮೇಲೆ ಓದಲಾದ(3)ರಲ್ಲಿ ಜಿಲ್ಲಾ ಯೋಜನಾ ಸಮಿತಿ ಸಭೆಗೆ ಹಾಜರಾಗುವ ಸದಸ್ಯರುಗಳಿಗೆ ಪ್ರತಿ ದಿನದ ಭಾಗವಹಿಸುವಿಕೆಗೆ ರೂ.500/-ಗಳ ಉಪವೇಶನ ಶುಲ್ಕವನ್ನು ಪಾವತಿಸಲು ಆದೇಶಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಮುಖ ಪ್ರಕರಣಗಳಿಗೆ ತಿದ್ದುಪಡಿ ತರಲಾಗಿರುತ್ತದೆ. ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ವಾಸ್ತವಿಕ ಬೇಡಿಕೆ ಮತ್ತು ಸಂಪನ್ಮೂಲಗಳ ಆಧಾರದ ಮೇಲೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿಕೊಳ್ಳಲು, ತಳಮಟ್ಟದಿಂದ ಯೋಜನೆಯನ್ನು ಸಿದ್ಧಪಡಿಸಲು ಹೊಸ ಉಪಬಂಧಗಳನ್ನು ಅಧಿನಿಯಮಕ್ಕೆ ಸೇರಿಸಲಾಗಿರುತ್ತದೆ.

ಈ ಪ್ರಕ್ರಿಯೆಯಲ್ಲಿ ಜಿಲ್ಲಾ ಯೋಜನಾ ಸಮಿತಿಯ ಕಾರ್ಯಜವಾಬ್ದಾರಿಯು ಪ್ರಮುಖವಾಗಿರುತ್ತದೆ. ಜಿಲ್ಲಾ ಯೋಜನಾ ಸಮಿತಿಯಲ್ಲಿ ಭಾಗವಹಿಸುವ ಸದಸ್ಯರುಗಳಿಗೆ ಪ್ರತಿ ದಿನದ ಭಾಗವಹಿಸುವಿಕೆಗೆ ಈಗ ಪಾವತಿಸುತ್ತಿರುವ ಉಪವೇಶನ ಶುಲ್ಕ ರೂ.500/-ಗಳ ಬದಲಾಗಿ ರೂ.1,000/-ಗಳ ಭವಿಷ್ಯವರ್ತಿ ಉಪವೇಶನ ಶುಲ್ಕವನ್ನು ಜಿಲ್ಲಾ ಯೋಜನಾ ಸಮಿತಿಯಿಂದ ಪಾವತಿಸಲು ಸರ್ಕಾರ ನಿರ್ಧರಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 198 ಜಿಪಸ 2016, ಬೆಂಗಳೂರು, ದಿನಾಂಕ:18-12-2018

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾ ಯೋಜನಾ ಸಮಿತಿ ಸಭೆಗಳಲ್ಲಿ ಭಾಗವಹಿಸುವ ಸದಸ್ಯರುಗಳಿಗೆ ಪ್ರತಿ ದಿನದ ಭಾಗವಹಿಸುವಿಕೆಗೆ ರೂ.1,000/-(ಒಂದು ಸಾವಿರ ರೂಪಾಯಿಗಳು ಮಾತ್ರ)ಗಳ ಭವಿಷ್ಯವರ್ತಿ ಉಪವೇಶನ ಶುಲ್ಕವನ್ನು ಈ ಆದೇಶದ ದಿನಾಂಕದಿಂದ ಅನ್ವಯಿಸುವಂತೆ ಪಾವತಿಸಲು ಹಾಗೂ ಈ ಭತ್ಯೆಯನ್ನು ಜಿಲ್ಲಾ ಯೋಜನಾ ಸಮಿತಿಯ ನಿಧಿಯಿಂದ ಭರಿಸುವಂತೆ ಆದೇಶಿಸಿದೆ.

ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 70 ವೆಚ್ಚ-6/2018, ದಿನಾಂಕ:11-12-2018ರ ಸಹಮತಿಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
18.12.18

**ಇವರಿಗೆ:**

1. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರುಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
2. ಮಾನ್ಯ ಅಧ್ಯಕ್ಷರುಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
3. ಎಲ್ಲಾ ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿಗಳು.

4. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
5. ಎಲ್ಲಾ ಮುಖ್ಯ ಯೋಜನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
6. ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ನಗರ ಸ್ಥಳೀಯ ಸಂಸ್ಥೆಗಳನ್ನೊಳಗೊಂಡಂತೆ).
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.